KAMS510040522018

**ಒಂದನೇ ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ ರವರ ನ್ಯಾಯಾಲಯ, ನಂಜನಗೂಡು.**

**ಉಪಸ್ಥಿತರುಃ ಶ್ರೀಮತಿ.ಸರಿತ ಕುಮಾರಿ.ಎ.ಎಂ.,**

ಬಿ.ಎ. ಎಲ್‌ಎಲ್.ಬಿ.,

**ಒಂದನೇ ಹೆಚ್ಚುವರಿ ದಿವಾಣಿ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾ. ದಂಡಾಧಿಕಾರಿಗಳು, ನಂಜನಗೂಡು.**

**ದಿನಾಂಕಃ 17 ನೇ ಮಾರ್ಚ್, 2026**

**ಸಿ.ಸಿ./1681/2018**

ಪಿರ್ಯಾದುದಾರರು ರಾಜ್ಯದ ಪರವಾಗಿ

ಕವಲಂದೆ ಠಾಣಾ ಪೊಲೀಸರು.

**(ಪ್ರತಿನಿಧಿಸುವವರುಃ ಸಹಾಯಕ ಸರ್ಕಾರಿ ಅಭಿಯೋಜಕರು)**

**ವಿರುದ್ಧ**

ಆರೋಪಿಯುಃ- ನಿಸಾರ್ ಅಹಮದ್ ಬಿನ್ ಲೇಟ್ ಮಹಮದ್ ಗೌಸ್

ವಾಸಃ ದೊಡ್ಡ ಕವಲಂದೆ ಗ್ರಾಮ, ನಂಜನಗೂಡು ತಾಲ್ಲೂಕು

**(ಆರೋಪಿ ಪರ ಪ್ರತಿನಿಧಿಸುವವರು ಶ್ರೀ.ಎಸ್ ಎಸ್ ., ವಕೀಲರು)**

## -::ತೀರ್ಪು::-

ಕವಲಂದೆ ಠಾಣಾ ಪೊಲೀಸರು ಈ ಮೊಕದ್ದಮೆಯನ್ನು ಆರೋಪಿಯ ವಿರುದ್ಧ ದಾಖಲು ಮಾಡಿ, ಆತನು ಭಾ.ದಂ.ಸಂಹಿತೆ ಕಲಂ.447,504,427 ಮತ್ತು 506 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತಾರೆ ಎಂದು ಆರೋಪಿಸಿರುತ್ತಾರೆ.

2. **ಅಭಿಯೋಜನಾ ಪ್ರಕರಣದ ಸಂಕ್ಷಿಪ್ತ ಸಾರಾಂಶ ಈ ಕೆಳಗಿನಂತೆ ಇರುತ್ತದೆಃ-**

ದಿಃ26.07.2018 ರಂದು ಕವಲಂದೆ ಪೊಲೀಸ ಠಾಣೆಗೆ ಸೇರಿದ ದೊಡ್ಡ ಕವಲಂದೆ ಗ್ರಾಮದ ಸರ್ವೆ ಸಂಃ2/1 ರ ಜಮೀನಿಗೆ ಕಾಂಪೌಂಡ್ ನಿರ್ಮಾಣ ಮಾಡಿದ್ದು, ಸಂಜೆ 5.00 ಗಂಟೆ ಸಮಯದಲ್ಲಿ ಆರೋಪಿಯು ಚಾಸಾ.1 ರವರ ಬಾಬ್ತು ಸರ್ವೆ ಸಂಃ 2/1ರ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿ ಚಾಸಾ.1 ರವರಿಗೆ ಬೋಳಿಮಗನೆ, ಸೂಳೆ ಮಗನೆ ಎಂದು ಅವಾಚ್ಯ ಶಬ್ದಗಳಿಂದ ಬೈದು ಕಟ್ಟಿದ್ದ ಕಾಂಪೌಂಡ್ ಗೋಡೆಯನ್ನು ಬೀಳಿಸಿ ಸುಮಾರು 2000/- ರೂ ನಷ್ಟವನ್ನುಂಟು ಮಾಡಿ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದು ಕವಲಂದೆ ಪೊಲೀಸ್ ಠಾಣೆಯ ನಿರೀಕ್ಷಕರು ಆರೋಪಿಯ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತಾರೆ.

3. ದೋಷಾರೋಪಣೆ ಪತ್ರ ಸಲ್ಲಿಕೆಯಾದ ನಂತರದಲ್ಲಿ ನ್ಯಾಯಾಲಯವು ಭಾ.ದಂ.ಸಂಹಿತೆ ಕಲಂ.447,504,427 ಮತ್ತು 506 ಕ್ಕೆ ಸಂಬಂಧಿಸಿದಂತೆ ಸಂಜ್ಞೆಯತೆಯನ್ನು ತೆಗೆದುಕೊಂಡಿರುತ್ತದೆ. ಆರೋಪಿಯು ನ್ಯಾಯಾಲಯಕ್ಕೆ ಹಾಜರಾಗಿ ಜಾಮೀನಿನ ಮೇಲೆ ಬಿಡುಗಡೆ ಹೊಂದಿರುತ್ತಾರೆ. ದೋಷಾರೋಪಣಾ ಪತ್ರ ಸಲ್ಲಿಕೆಯಾದ ನಂತರ ದಂ.ಪ್ರ.ಸಂಹಿತೆಯ ಕಲಂ.207ರಡಿಯಲ್ಲಿ ಅವಶ್ಯವಿರುವ ಕಟ್ಲೆ ದಾಖಲೆಗಳನ್ನು ಆರೋಪಿಗೆ ಒದಗಿಸಲಾಯಿತು. ಆಪಾದನೆಯ ಸಾರಾಂಶವನ್ನು ತಯಾರು ಮಾಡಿ ಆರೋಪಿಗೆ ಓದಿ ಹೇಳಲಾಯಿತು. ಆರೋಪಿಯು ತಾನು ತಪ್ಪು ಮಾಡಿಲ್ಲ ವಿಚಾರಣೆಯಾಗಬೇಕೆಂದು ಕೋರಿದ್ದರಿಂದ ಪ್ರಕರಣವನ್ನು ವಿಚಾರಣೆಗೆ ತೆಗೆದುಕೊಳ್ಳಲಾಯಿತು.

4. ಅಭಿಯೋಜನೆಯವರ ಪರವಾಗಿ ದೋಷಾರೋಪಣಾ ಪತ್ರದಲ್ಲಿ ತೋರಿಸಿರುವ 7 ಜನ ಸಾಕ್ಷಿದಾರರ ಪೈಕಿ 5 ಜನ ಸಾಕ್ಷಿದಾರರನ್ನು ವಿಚಾರಿಸಿಕೊಂಡು, 10 ದಾಖಲಾತಿಗಳನ್ನು

ನಿಶಾನೆಯಾಗಿ ಗುರುತಿಸಿಕೊಳ್ಳಲಾಗಿರುತ್ತದೆ.

5. ಸಾಕ್ಷ್ಯ ವಿಚಾರಣೆ ಮುಗಿದ ನಂತರದಲ್ಲಿ, ಆಪಾದಿತರ ವಿರುದ್ಧ ಬಂದಂತಹ ಸಾಕ್ಷ್ಯವನ್ನು ದಂ.ಪ್ರ.ಸಂಹಿತೆ ಕಲಂ.313 ರಡಿಯಲ್ಲಿ ಮಾಡಿಕೊಳ್ಳಲಾದ ಹೇಳಿಕೆಯಲ್ಲಿ ಆರೋಪಿಯು ಸಂಪೂರ್ಣವಾಗಿ ನಿರಾಕರಣೆ ಮಾಡಿರುತ್ತಾರೆ. ಆರೋಪಿಯು ತಮ್ಮ ಪರವಾಗಿ ಯಾವುದೇ ಸಾಕ್ಷಿದಾರರನ್ನು ವಿಚಾರಿಸಿಕೊಂಡಿರುವುದಿಲ್ಲ.

6. ಉಭಯ ಪಕ್ಷಗಾರರ ಪರ ವಾದ ಕೇಳಲಾಯಿತು.

7. ಆರೋಪಿಯು ಎಸಗಿದ್ದಾರೆ ಎನ್ನಲಾದ ಆರೋಪಗಳನ್ನು ರುಜುವಾತುಪಡಿಸಲು ಅಭಿಯೋಜನೆಯವರು ಈ ಕೆಳಕಂಡ ಅಂಶಗಳನ್ನು ರುಜುವಾತುಪಡಿಸಬೇಕಾಗಿದೆ.

## ಅಂಶಗಳು

1. ದಿನಾಂಕ 26.07.2018 ರಂದು ಸಂಜೆ 05.00 ಗಂಟೆ ಸಮಯದಲ್ಲಿ ಕವಲಂದೆ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ ದೊಡ್ಡಕವಲಂದೆ ಗ್ರಾಮದ ಸರ್ವೆ ನಂ.2/1 ರ ಜಮೀನಿಗೆ ಚಾಸಾ.1 ರವರು ಕಾಂಪೌಂಡ್ ನಿರ್ಮಾಣ ಮಾಡಿದ್ದು, ಆರೋಪಿಯು ಚಾಸಾ.1 ರವರ ಬಾಬ್ತು ಸರ್ವೆ ನಂ.2/1 ರ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿರುತ್ತಾರೆ. ಆದ್ದರಿಂದ ಆರೋಪಿಯು ಭಾ.ದಂ.ಸಂ. ಕಲಂ.447 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತಾರೆ ಎನುವುದನ್ನು ಅಭಿಯೋಜನೆಯವರು ರುಜುವಾತುಪಡಿಸುವರೇ?

2. ಮೇಲ್ಕಂಡ ದಿನಾಂಕ, ವೇಳೆ ಹಾಗೂ ಸ್ಥಳದಲ್ಲಿ ಆರೋಪಿಯು ಚಾಸಾ-1 ರವರಿಗೆ ಬೋಳಿ ಮಗನೆ, ಸೂಳೆ ಮಗನೆ ಎಂದು ಅವಾಚ್ಯ

ಶಬ್ದಗಳಿಂದ ಬೈದು ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಶಾಂತಿ ಭಂಗ ಮಾಡಲಿ ಅಥವಾ ಇತರೆ ಯಾವುದೇ ಅಪರಾಧ ಮಾಡಲಿ ಎನ್ನುವ ಉದ್ದೇಶದಿಂದ ಅವರನ್ನು ಅವಮಾನಿಸಿರುತ್ತಾರೆ. ಆದ್ದರಿಂದ ಆರೋಪಿಯು ಭಾ.ದಂ.ಸಂ.ಕಲಂ.504 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತಾರೆ ಎನ್ನುವುದನ್ನು ಅಭಿಯೋಜನೆಯವರು ರುಜುವಾತುಪಡಿಸುವರೇ ?

3. ಮೇಲ್ಕಂಡ ದಿನಾಂಕ, ವೇಳೆ ಹಾಗೂ ಸ್ಥಳದಲ್ಲಿ ಆರೋಪಿಯು ಚಾಸಾ.1 ರವರು ಕಟ್ಟಿದ್ದ ಕಾಂಪೌಂಡ್ ಗೋಡೆಯನ್ನು ಬೀಳಿಸಿ ಚಾಸಾ.1 ರವರಿಗೆ ಸುಮಾರು ರೂ.2,000/- ಗಳಷ್ಟು ನಷ್ಟವನ್ನುಂಟು ಮಾಡಿರುತ್ತಾರೆ.ಆದ್ದರಿಂದ ಆರೋಪಿಯು ಭಾ.ದಂ.ಸಂ.ಕಲಂ.427 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತಾರೆ ಎನ್ನುವುದನ್ನು ಅಭಿಯೋಜನೆಯವರು ರುಜುವಾತುಪಡಿಸುವರೇ ?

4 ಮೇಲ್ಕಂಡ ದಿನಾಂಕ, ವೇಳೆ ಹಾಗೂ ಸ್ಥಳದಲ್ಲಿ ಆರೋಪಿಯು ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆಯನ್ನು ಎಸಗಿರುತ್ತಾರೆ. ಆದ್ದರಿಂದ ಆರೋಪಿಯು ಭಾ.ದಂ.ಸಂ.ಕಲಂ.506 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತಾರೆ ಎನ್ನುವುದನ್ನು ಅಭಿಯೋಜನೆಯವರು ರುಜುವಾತುಪಡಿಸುವರೇ ?

5 ಮಾಡುವ ಆದೇಶ ಏನು?

8. ಮೇಲಿನ ಅಂಶಗಳಿಗೆ ನಾನು ಈ ಕೆಳಗೆ ನೀಡಿರುವ ಕಾರಣಗಳಿಗಾಗಿ

ಕೆಳಕಂಡಂತೆ ಉತ್ತರಿಸುತ್ತೇನೆಃ

**ಅಂಶ-1 ರಿಂದ 4** **:ನಕಾರಾತ್ಮಕವಾಗಿ**

**ಅಂಶ-5** **:ಅಂತಿಮ ಆದೇಶದಂತೆ**

**ಈ ಕೆಳಕಂಡ ಕಾರಣಗಳಿಂದ:**

## ಕಾರಣಗಳು

9. **ಅಂಶ 1 ರಿಂದ 4 :-** ಈ ಎಲ್ಲಾ ಅಂಶಗಳು ಒಂದೇ ಘಟನೆಯಲ್ಲಿ ನಡೆದ ಹಲವು ಅಪರಾಧಗಳಿಗೆ ಸಂಬಂಧಿಸಿದವುಗಳಾಗಿರುವುದರಿಂದಲೂ ಮತ್ತು ಅವುಗಳಿಗೆ ನೀಡಲಾಗುವ ಕಾರಣಗಳು ಪುನರಾವರ್ತನೆಯಾಗುವುದನ್ನು ತಡೆಯುವ ಸಲುವಾಗಿ ಅವುಗಳನ್ನು ಒಟ್ಟಿಗೆ ಚರ್ಚೆಗೆ ಎತ್ತಿಕೊಳ್ಳಲಾಗಿದೆ.

10. ಈ ಪ್ರಕರಣದಲ್ಲಿ ಚಾಸಾ.1 ರವರು ಪ್ರಕರಣದ ಪಿರ್ಯಾದುದಾರರಾಗಿದ್ದು ಅವರು ಮರಣ ಹೊಂದಿರುತ್ತಾರೆ. ಪ್ರತ್ಯಕ್ಷ ದರ್ಶಿಯಾದ ಚಾಸಾ.2 ರವರೂ ಕೂಡ ಮರಣ ಹೊಂದಿರುತ್ತಾರೆ. ಚಾಸಾ.3 ರವರು ಪ್ರಕರಣದ ಪ್ರತ್ಯಕ್ಷ ದರ್ಶಿಯಾಗಿದ್ದು ಕೃತ್ಯದ ನಡೆದ ಬಗ್ಗೆ ಸಾಕ್ಷ್ಯ ನುಡಿದಿದ್ದು, ಇವರನ್ನು ಪ್ರಾಸಾ.1 ಎಂದು, ಚಾಸಾ.4 ಮತ್ತು 5 ರವರು ಕೃತ್ಯ ನಡೆದ ಸ್ಥಳದ ಮಹಜರ್ ಸಾಕ್ಷಿದಾರರಾಗಿದ್ದು, ಇವರನ್ನು ಪ್ರಾಸಾ.2 ಮತ್ತು 5 ಎಂದು ಮತ್ತು ಚಾಸಾ.6 ಮತ್ತು 7 ರವರು ಈ ಪ್ರಕರಣದಲ್ಲಿ ತನಿಖಾಧಿಕಾರಿಯಾಗಿದ್ದು, ತನಿಖೆ ಪೂರೈಸಿ ಅಂತಿಮ ವರದಿಯನ್ನು ಸಲ್ಲಿಸಿದ ಬಗ್ಗೆ ಸಾಕ್ಷ್ಯ ನುಡಿದಿದ್ದು, ಇವರನ್ನು ಪ್ರಾಸಾ.3 ಮತ್ತು 4 ಎಂದು ವಿಚಾರಣೆಗೆ ಒಳಪಡಿಸಲಾಗಿದೆ. ಈ ಪ್ರಕರಣದಲ್ಲಿ ಪ್ರಾಸಾ.1,2 ಮತ್ತು 5 ರವರು ಪ್ರತಿಕೂಲ

ಸಾಕ್ಷಿದಾರರಾಗಿರುತ್ತಾರೆ.

11. ಪ್ರಾಸಾ-3-ರವಿಕುಮಾರ ಎಂ ರವರು ತಮ್ಮ ಸಾಕ್ಷ್ಯದಲ್ಲಿ, ದಿಃ 20.08.2018 ರಂದು ಪ್ರಕರಣದ ಕಡತವನ್ನು ಚಾಸಾ 6 ರವರಿಂದ ಪಡೆದು ಪರಿಶೀಲಿಸಿ ಅದೇ ದಿನ ಕೃತ್ಯ ನಡೆದ ಸ್ಥಳದ ಆರ್.ಟಿ.ಸಿ ಯನ್ನು ಕೋರಿ ಕವಲಂದೆ ಉಪ ತಹಸೀಲ್ದಾರ್ ರವರಿಗೆ ಮನವಿ ಮಾಡಿರುತ್ತೇನೆ. ದಿಃ 21.08.2018 ರಂದು ಉಪ ತಹಸೀಲ್ದಾರ್ ರವರಿಂದ ಆರ್.ಟಿ.ಸಿಯನ್ನು ಪಡೆದಿರುತ್ತೇನೆ. ನಂತರ ಈ ಪ್ರಕರಣದಲ್ಲಿ ತನಿಖೆ ಪೂರ್ಣಗೊಂಡಿದ್ದರಿಂದ ಆರೋಪಿಯ ವಿರುದ್ಧ ಮಾನ್ಯ ಘನ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದು ನುಡಿದಿರುತ್ತಾರೆ.

12. ಪ್ರಾಸಾ.4 -ಶ್ರೀ.ಕೆ ಮಹೇಶ ರವರು ತಮ್ಮ ಸಾಕ್ಷ್ಯದಲ್ಲಿ, ದಿಃ 26.07.2018 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಸಂಜೆ 18.30 ಗಂಟೆ ಸಮಯದಲ್ಲಿ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಹೊಂದಿಕೊಂಡು ಠಾಣಾ ಮೊಕದ್ದಮೆ ಸಂಖ್ಯೆ 110/2018 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮಾನ್ಯ ಘನ ನ್ಯಾಯಾಲಯು ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ದಿಃ 27.07.2018 ರಂದು ಕೃತ್ಯ ಸ್ದಳಕ್ಕೆ ಭೇಟಿ ನೀಡಿ ಚಾಸಾ 1, 4 ಮತ್ತು 5 ರವರನ್ನು ಸ್ಥಳಕ್ಕೆ ಬರ ಮಾಡಿಕೊಂಡು ಚಾಸಾ.4 ಮತ್ತು 5 ರವರಿಗೆ ಮಹಜರ್ ಗೆ ಸಹಕರಿಸುವಂತೆ ನೋಟಿಸು ಜಾರಿ ಮಾಡಿ ಚಾಸಾ-1 ರವರು ಕೃತ್ಯ ಸ್ಥಳವನ್ನು ತೋರಿಸಿಕೊಟ್ಟ ಮೇರೆಗೆ ಚಾಸಾ-4 ಮತ್ತು 5 ರವರ ಸಮಕ್ಷಮ ಕೃತ್ಯ ಸ್ಥಳದಲ್ಲಿ ಮಹಜರ್ ಕ್ರಮ ಜರುಗಿಸಿರುತ್ತೇನೆ. ಚಾಸಾ.2 ಮತ್ತು 3 ರವರ ಹೇಳಿಕೆ ಪಡೆದಿರುತ್ತೇನೆ. ದಿಃ 07.08.2018 ರಂದು ಆರೋಪಿಗೆ ಕಲಂ 41(ಎ) ಸಿ.ಆರ್.ಪಿ.ಸಿ ಅಡಿಯಲ್ಲಿ ನೋಟಿಸನ್ನು ಜಾರಿ

ಮಾಡಿರುತ್ತೇನೆ. ದಿಃ 20.08.2018 ರಂದು ಉಪ ತಹಸೀಲ್ದಾರ್ ರವರಿಗೆ ಚಾಸಾ 1 ರವರ ಬಾಬ್ತು ಜಮೀನಿಗೆ ಸಂಬಂಧಿಸಿದಂತೆ ಆರ್.ಟಿ.ಸಿ ಯನ್ನು ನೀಡುವಂತೆ ಮನವಿ ಮಾಡಿರುತ್ತೇನೆ. ನಂತರ ಈ ಪ್ರಕರಣದ ಕಡತವನ್ನು ಚಾಸಾ-7 ರವರಿಗೆ ಹಸ್ತಾಂತರಿಸಿರುತ್ತೇನೆ ಎಂದು ನುಡಿದಿರುತ್ತಾರೆ.

13. ಈ ಪ್ರಕರಣದಲ್ಲಿ ಪ್ರಥಮ ವರ್ತಮಾನ ಹೇಳಿಕೆ ನೀಡಿದ ಚಾಸಾ.1 ಮತ್ತು ಪ್ರತ್ಯಕ್ಷದರ್ಶಿಯಾದ ಚಾಸಾ. 2 ರವರು ಮೃತಪಟ್ಟಿರುತ್ತಾರೆ. ಪ್ರಾಸಾ.1 ರಿಂದ 5 ರವರು ಈ ಪ್ರಕರಣದಲ್ಲಿ ಸಾಕ್ಷ್ಯ ನುಡಿದಿದ್ದು, ಪ್ರತ್ಯಕ್ಷ ಸಾಕ್ಷಿದಾರರು, ಮಹಜರ್ ಸಾಕ್ಷಿದಾರರು ಈ ಪ್ರಕರಣದ ಬಗ್ಗೆ ಏನೂ ತಿಳಿದಿಲ್ಲ ಎಂದು ಸಾಕ್ಷ್ಯ ನುಡಿದು ಪ್ರಕರಣದಲ್ಲಿ ಪ್ರತಿಕೂಲ ಸಾಕ್ಷಿ ನುಡಿದಿರುತ್ತಾರೆ. ಪ್ರಾಸಾ.3 ಮತ್ತು 4 ರವರು ಈ ಪ್ರಕರಣದ ತನಿಖಾಧಿಕಾರಿಗಳಾಗಿದ್ದು, ಈ ಪ್ರಕರಣದಲ್ಲಿ ಅವರು ಮಾಡಿರುವ ತನಿಖೆಯ ಬಗ್ಗೆ ಸಾಕ್ಷ್ಯ ನುಡಿದಿರುತ್ತಾರೆ. ಆದ್ದರಿಂದ, ಪ್ರತ್ಯಕ್ಷ ಸಾಕ್ಷಿದಾರರು ಪ್ರತಿಕೂಲ ಸಾಕ್ಷಿದಾರರಾಗಿದ್ದು, ಕೇವಲ ತನಿಖಾಧಿಕಾರಿಗಳ ವಿಚಾರಣೆಯ ಮೇಲೆ ಆರೋಪಿಯು ಅಪರಾಧ ಮಾಡಿದ್ದಾರೆಂದು ಸಾಬೀತುಪಡಿಸಲು ಅಭಿಯೋಜನೆಗೆ ಸಾಧ್ಯವಾಗಿರುವುದಿಲ್ಲ.

14. ಆದ್ದರಿಂದ, ಪ್ರಾಸಾ.3 ಮತ್ತು 4 ರವರ ಸಾಕ್ಷ್ಯವನ್ನು ಆಧರಿಸಿ ಆರೋಪಿಯನ್ನು ತಪ್ಪಿತಸ್ಥರೆಂದು ನಿರ್ಣಯಿಸುವುದು ಸೂಕ್ತ ಕ್ರಮವಾಗಲಾರದು. ಒಟ್ಟಾರೆಯಾಗಿ ಮೇಲಿನ ಎಲ್ಲಾ ಸಾಕ್ಷ್ಯವನ್ನು ತುಲನೆ ಮಾಡಿ ನೋಡಿದಾಗ, ಆರೋಪಿತನ ವಿರುದ್ದ ಅಭಿಯೋಜನೆ ಆರೋಪ ಮಾಡಿದಂತ ಯಾವುದೇ ಆರೋಪ ಸಾಬೀತುಪಡಿಸಲು ಅಭಿಯೋಜನೆಯು ವಿಫಲವಾಗಿರುತ್ತದೆ. ಈ ಮೇಲೆ ಚರ್ಚಿಸಿದ ಕಾರಣಗಳಿಗಾಗಿ, ಆರೋಪಿತನ ವಿರುದ್ಧ ಆಪಾದಿಸಲಾದ ದೋಷಾರೋಪಣೆಗಳನ್ನು ಸಂಶಯಾತೀತವಾಗಿ ರುಜುವಾತುಪಡಿಸಲು ಅಭಿಯೋಜನೆಯವರು ವಿಫಲರಾಗಿರುತ್ತಾರೆಂದು ನಿರ್ಣಯಿಸಿ **ಅಂಶ-1 ರಿಂದ 4** ನ್ನು **ನಕಾರಾತ್ಮಕವಾಗಿ ಉತ್ತರಿಸುತ್ತೇನೆ.**

15. **ಅಂಶ-5:-** ಈ ಮೇಲೆ ಚರ್ಚಿಸಿದ ಕಾರಣಗಳಿಗಾಗಿ ಅಭಿಯೋಜನೆಯವರು ಆರೋಪಿಯ ವಿರುದ್ಧ ದೋಷಾರೋಪಿಸಲಾಗಿರುವಂತಹ ಆಪಾದನೆಗಳನ್ನು ರುಜುವಾತುಪಡಿಸಲು ವಿಫಲರಾಗಿರುವುದರಿಂದ ಈ ಕೆಳಕಂಡಂತೆ ಆದೇಶ ಮಾಡಿರುತ್ತೇನೆ.

**-:: ಆದೇಶ ::-**

ಆರೋಪಿಯನ್ನು ದಂಡ ಪ್ರಕ್ರಿಯಾ ಸಂಹಿತೆ ಕಲಂ.248(1)ರಡಿಯಲ್ಲಿ ಆತನ ವಿರುದ್ಧ ದೋಷಾರೋಪಿಸಲಾದ ಭಾ.ದಂ.ಸಂಹಿತೆ ಕಲಂ. 447,504,427 ಮತ್ತು 506 ರಡಿಯಲ್ಲಿನ ಆಪಾದನೆಗಳಿಗೆ ತಪ್ಪಿತಸ್ಥನಲ್ಲವೆಂದು ತೀರ್ಮಾನಿಸಿ **ಖುಲಾಸೆ ಮಾಡಿ ಬಿಡುಗಡೆ ಮಾಡಲಾಗಿದೆ.**

ಆರೋಪಿಯ ಮತ್ತು ಅವರ ಜಾಮೀನುದಾರರ ಜಾಮೀನು ಮುಚ್ಚಳಿಕೆಯು ದಂ.ಪ್ರ.ಸಂ.ಕಲಂ.437-ಎ ರಂತೆ ಮುಂದಿನ 6 ತಿಂಗಳವರೆಗೆ ಚಾಲ್ತಿಯಲ್ಲಿರುತ್ತವೆ.

(ಈ ತೀರ್ಪನ್ನು ಶೀಘ್ರಲಿಪಿಗಾರರಿಗೆ ಗಣಕಯಂತ್ರದ ಮೇಲೆ ನೇರ ಉಕ್ತಲೇಖನ ಕೊಟ್ಟು ಅವರಿಂದ ಬೆರಳಚ್ಚು ಮಾಡಿಸಿದ ನಂತರ ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ದಿಃ **17 ನೇ ಮಾರ್ಚ್ -2026** ರಂದು ಆದೇಶವನ್ನು ಘೋಷಿಸಲಾಯಿತು.)

**(ಶ್ರೀಮತಿ.ಸರಿತ ಕುಮಾರಿ.ಎ.ಎಂ.)**
ಒಂದನೇ ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ.ಗಳು,
ನಂಜನಗೂಡು.

# -ಅನುಬಂಧ-

**1. ಅಭಿಯೋಜನಾ ಪರ ವಿಚಾರಣೆ ಮಾಡಲಾದ ಸಾಕ್ಷಿಗಳ ಪಟ್ಟಿ**

| | | |
|---|---|---|
| ಪ್ರಾಸಾ-1 | : | ಮರಪ್ಪ |
| ಪ್ರಾಸಾ-2 | : | ರಮೇಶ |
| ಪ್ರಾಸಾ-3 | : | ರವಿಕುಮಾರ ಎಂ |
| ಪ್ರಾಸಾ-4 | : | ಕೆ ಮಹೇಶ |
| ಪ್ರಾಸಾ-5 | : | ಅನಿಲ್ ಕುಮಾರ್ |

**2. ಅಭಿಯೋಜನಾ ಪರ ಗುರುತಿಸಲಾದ ದಾಖಲೆಗಳುಃ**

| | | |
|---|---|---|
| ನಿಪಿ-1 | : | ಪ್ರಾಸಾ.1 ರವರ ಹೇಳಿಕೆ |
| ನಿಪಿ-2 | : | ಸ್ಥಳ ಪಂಚನಾಮೆ |
| ನಿಪಿ-2(ಎ-ಸಿ ) | : | ಸಾಕ್ಷಿದಾರರ ರುಜುಗಳು |
| ನಿಪಿ-3 | : | ಆರ್ ಟಿ ಸಿ |
| ನಿಪಿ-3(ಎ ) | : | ಸಾಕ್ಷಿದಾರರ ರುಜು |
| ನಿಪಿ-4 | : | ಪ್ರಥಮ ವರ್ತಮಾನ ವರದಿ |
| ನಿಪಿ-4(ಎ) | : | ಸಾಕ್ಷಿದಾರರ ರುಜು |
| ನಿಪಿ-5 | : | ಪಂಚಾಯ್ತಿದಾರರಿಗೆ ನೀಡಿದ ನೋಟೀಸು |
| ನಿಪಿ-5(ಎ) | : | ಸಾಕ್ಷಿದಾರರ ರುಜು |
| ನಿಪಿ-6 ರಿಂದ 10 | : | ಫಾರಂ ಸಂಃ29 |

ನಿಪಿ-6(ಎ) ರಿಂದ 10-ಎ: ಸಾಕ್ಷಿದಾರರ ರುಜುಗಳು

3. **ಅಭಿಯೋಜನಾ ಪರ ಗುರುತಿಸಲಾದ ಮುದ್ದೆಮಾಲುಗಳುঃ**

- ಇಲ್ಲಾ -

4. **ಆರೋಪಿಯ ಪರ ವಿಚಾರಣೆ ಮಾಡಲಾದ ಸಾಕ್ಷಿಗಳ ಪಟ್ಟಿ.**

- ಇಲ್ಲಾ -

5. **ಆರೋಪಿಯ ಪರ ಗುರುತಿಸಲಾದ ದಾಖಲೆಗಳುঃ**

- ಇಲ್ಲಾ -

ಒಂದನೇ ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ.ಗಳು,
ನಂಜನಗೂಡು